# ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು ನ್ಯಾಯಾಲಯ, ಕಲಘಟಗಿ

**ಸಿಸಿ ನಂ 53/2021**

ಸತ್ಯ ಪ್ರತಿಜ್ಞೆಯ ಮೇರೆಗೆ ದಿನಾಂಕ 06-02-2025 ರಂದು ಪ್ರಮಾಣ ಮಾಡಿಸಲಾಯಿತು

| | | | |
|---|---|---|---|
| ಸಾಕ್ಷಿಯ ಹೆಸರು | ಃ | ಮಹದೇವಪ್ಪ | **ಪ್ರಾ.ಸಾ ಃ 04** |
| ತಂದೆ ಃ ಗಂಡ ಹೆಸರು | ಃ | ಕುಬೇರಪ್ಪ ಸಿಂಪಿ | **ಚಾ.ಸಾ ಃ 04** |
| ವಯಸ್ಸು | ಃ | 50 ವರ್ಷ | |
| ಉದ್ಯೋಗ | ಃ | ಶಿರಸ್ತೇದಾರ, 73- ಹುಬ್ಬಳ್ಳಿ ಧಾರವಾಡ ಕೇಂದ್ರ ಚುನಾವಣಾ ವಿಭಾಗ ಹುಬ್ಬಳ್ಳಿ | |
| ವಾಸಸ್ಥಳ | ಃ | ಹುಬ್ಬಳ್ಳಿ | |

**ಮುಖ್ಯ ವಿಚಾರಣೆ ಃ ಮಾನ್ಯ ಸ.ಸ.ಅ. ರವರಿಂದಃ**

ನಾನು 2014 ರಿಂದ 2021 ರವರೆಗೆ ಕಲಘಟಗಿಯ ತಹಶೀಲ್ದಾರ ಕಚೇರಿ, ಕಲಘಟಗಿ ಹೋಬಳಿ ಕಂದಾಯ ನಿರೀಕ್ಷಕರು ಎಂದು ಕರ್ತವ್ಯನಿರ್ವಹಿಸಿದ್ದೇನೆ. ನನಗೆ ಚಾಸಾ-5 ರವರ ಪರಿಚಯ ಇದೆ. ಸುಮಾರು 2 ವರ್ಷಗಳ ಹಿಂದೆ ಸದರಿಯವರು ಮೃತಪಟ್ಟಿರುತ್ತಾರೆ.

ದಿನಾಂಕ 31.10.2017 ರಂದು ಕಲಘಟಗಿ ಪೋಲೀಸರು ಪಂಚನಾಮೆ ಸಲುವಾಗಿ ನನ್ನನ್ನು ಮತ್ತು ಚಾಸಾ-5 ರವರನ್ನು ಠಾಣೆಗೆ ಕರೆಸಿದ್ದರು. ನಮ್ಮ ಸಮಕ್ಷಮ ಕಾರು ಖರೀದಿಸುವ ಸಂದರ್ಭದಲ್ಲಿ ಆದ ಮೋಸದ ವಿಚಾರವಾಗಿ ದಾಖಲೆಗಳನ್ನು ತನಿಖೆ ಸಲುವಾಗಿ ಚಾಸಾ-1 ರವರು ಹಾಜರ ಪಡಿಸಿದ ದಾಖಲೆಗಳನ್ನು ಜಪ್ತಿ ಪಡಿಸಿಕೊಂಡು ಪಂಚನಾಮೆ ಜರುಗಿಸಿರುತ್ತಾರೆ. ನಾನು ಸದರಿ ಪಂಚನಾಮೆಗೆ ಸಾಕ್ಷಿ ಎಂದು ಸಹಿ ಮಾಡಿರುತ್ತೇನೆ. ನಿಪಿ-2 ರಲ್ಲಿರುವ ತನ್ನ ಸಹಿಯನ್ನು ನೋಡಿ ಸಾಕ್ಷಿ ಗುರುತಿಸಿದ್ದು ಅದನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. ಆ ಸಮಯದಲ್ಲಿ ಪೋಟೋ ತೆಗೆದಿರುತ್ತಾರೆ. ನಿಪಿ-13 ನ್ನು ನೋಡಿ ಸಾಕ್ಷಿ ಗುರುತಿಸಿರುತ್ತಾರೆ, ಜಪ್ತಿ ಪಡಿಸಿಕೂಂಡ ದಾಖಲೆಗಳನ್ನು ನೋಡಿದರೆ ಗುರುತಿಸುತ್ತೇನೆ. ನಿಪಿ-2 ರಂತೆ ಜಪ್ತಿ ಪಡಿಸಿಕೊಂಡ ನಿಪಿ-3 ರಿಂದ 12 ದಾಖಲೆಗಳನ್ನು ನೋಡಿ ಸಾಕ್ಷಿ ಗುರುತಿಸಿರುತ್ತಾರೆ. ಪಂಚನಾಮೆಯನ್ನು ಸಾಯಂಕಾಲ 5-15 ರಿಂದ 6-30 ರವರೆಗೆ ಜರುಗಿಸಿರುತ್ತಾರೆ.

**ಪಾಟೀ ಸವಾಲುಃ 1 ನೇ ಆರೋಪಿ ಪರ ಶ್ರೀ ಎಂ ಎಂ ಸಿ ವಕೀಲರಿಂದಃ**

ಚಾಸಾ-1 ರವರು ಪಂಚನಾಮೆ ಸಮಯದಲ್ಲಿ ದಾಖಲೆಗಳನ್ನು ಹಾಜರ ಪಡಿಸಿದ್ದಾರೆಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಚಾಸಾ-1 ರವರ ಮಾತು ಕೇಳಿ ಪ್ರಕರಣಕ್ಕೆ ಅನುಕೂಲವಾಗಲಿ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಸಮಕ್ಷಮ ಹಾಜರ ಪಡಿಸಿದ ದಾಖಲೆಗಳು ಹಾಗೂ ಪ್ರಕರಣಕ್ಕೆ ಸಂಬಂಧ ಇಲ್ಲ ಎಂದರೆ ಸರಿಯಲ್ಲ. ಪಂಚನಾಮೆ ಬರೆಯಲು ಚಾಸಾ-1 ರವರು ಮಾಹಿತಿ ನೀಡಿರುತ್ತಾರೆ. ನಿಪಿ-1 ರ ಬಗ್ಗೆ ನನಗೆ ವಯಕ್ತಿಕ ಮಾಹಿತಿ ಇಲ್ಲ ಎಂದರೆ ಸರಿಯಲ್ಲ. ಪಂಚನಾಮೆ ಬರೆಯಲು ನಾನು

ಮಾಹಿತಿ ನೀಡಿಲ್ಲ. ನಾನು ಖಾಲಿ ಹಾಳೆಗೆ ಪೋಲೀಸ ಠಾಣೆಯಲ್ಲಿ ಸಹಿ ಮಾಡಿದ್ದೇನೆ ಎಂದರೆ ಸರಿಯಲ್ಲ. ನಿಪಿ-13 ನ್ನು ಪೋಲೀಸ ಠಾಣೆಯಲ್ಲಿ ತೆಗೆದಿಲ್ಲ ಎಂದರೆ ಸರಿಯಲ್ಲ. ನನಗೆ ಪ್ರಕರಣದ ಬಗ್ಗೆ ಯಾವುದೆ ಮಾಹಿತಿ ಇಲ್ಲದಿದ್ದರೂ ಕೂಡಾ ಪೋಲೀಸರ ಮಾತು ಕೇಳಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ 3 ನೇ ಆರೋಪಿ ಪರ ಶ್ರೀ ಎನ್ ಎಸ್ ಯು ವಕೀಲರಿಂದಃ**

ಪಂಚನಾಮೆ ಮಾಡುವ ಮುಂಚೆ ಪೋಲೀಸರು ನನಗೆ ನೋಟೀಸ ಕೊಟ್ಟಿರಲಿಲ್ಲ. ದಾಖಲೆಗಳನ್ನು ಚಾಸಾ-1 ರವರು ತಂದಿದ್ದರು. ನಾನು ಪೋಲೀಸರ ಒತ್ತಾಯಕ್ಕೆ ಪಂಚನಾಮೆಗೆ ಸಹಿ ಮಾಡಿದ್ದೇನೆ ಎಂದರೆ ಸರಿಯಲ್ಲ. ಚಾಸಾ-1 ರವರು ದಾಖಲೆಗಳನ್ನು ಹಾಜರ ಪಡಿಸಿದ್ದಾರೆಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

(ಹೆಚ್ಚುವರಿಯಾಗಿ 1 ನೇ ಆರೋಪಿ ಪರ ಮಾಡಿದ ಪಾಟೀ ಸವಾಲನ್ನು ಅಳವಡಿಸಿಕೊಳ್ಳಲು ಕೇಳಿಕೊಂಡಿದ್ದು ಅಳವಡಿಸಿಕೊಳ್ಳಲಾಯಿತು)

**ಮರು ವಿಚಾರಣೆಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೆ ಸರಿ ಇದೆ.

ಹಿರಿಯ ದಿವಾಣಿ ನ್ಯಾಯಾಧೀಶರು,
ಕಲಘಟಗಿ.